ನಂ:ಕ.ಪಂ.ಸೀ.ಆ/02/ಮಾ.ಸೂ/2022 ದಿನಾಂಕ:19.05.2022

**ವಿಷಯ:** "ತಾಲ್ಲೂಕು ಪಂಚಾಯತಿ ಮತ್ತು ಜಿಲ್ಲಾ ಪಂಚಾಯತಿ ಸದಸ್ಯರ ಪ್ರಾದೇಶಿಕ ಚುನಾವಣಾ ಕ್ಷೇತ್ರಗಳ ಸೀಮಾ ನಿರ್ಣಯದ ಬಗ್ಗೆ ಮಾರ್ಗಸೂಚಿ". ಗಳನ್ನು ಹೊರಡಿಸುವ ಕುರಿತು.

**ಉಲ್ಲೇಖ:**
1. ಸರ್ಕಾರದ ಅಧಿಸೂಚನೆ ಸಂಖ್ಯೆ:ಸಂವ್ಯಶಾಇ 37 ಶಾಸನ 2021, ದಿನಾಂಕ:18-09-2021.
2. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 10 ಶಾಸನ 2022, ದಿನಾಂಕ:05-04-2022.

*****

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 5, 121, 122, 123, 124, 161, 162, 163, 308 ನೇ ಪ್ರಕರಣಗಳಿಗೆ ಉಲ್ಲೇಖ-1ರ ಅಧಿಸೂಚನೆಯಲ್ಲಿ ತಿದ್ದುಪಡಿ ಮಾಡಲಾಗಿದೆ. ಈ ತಿದ್ದುಪಡಿಯ ಅನುಸಾರ ತಾಲ್ಲೂಕು ಪಂಚಾಯತಿ ಮತ್ತು ಜಿಲ್ಲಾ ಪಂಚಾಯತಿ ಕ್ಷೇತ್ರಗಳ ಸದಸ್ಯರ ಸಂಖ್ಯೆ ಮತ್ತು ಸೀಮಾ ನಿರ್ಣಯದ ಈ ಹಿಂದಿನ ಎಲ್ಲಾ ಅಧಿಸೂಚನೆಗಳು ರದ್ದಾಗಿರುತ್ತವೆ ಹಾಗೂ ತಾಲ್ಲೂಕು ಪಂಚಾಯತಿ ಮತ್ತು ಜಿಲ್ಲಾ ಪಂಚಾಯತಿಗಳ ಕ್ಷೇತ್ರಗಳನ್ನು ಮೀಸಲಿರಿಸಿರುವ ಎಲ್ಲಾ ಅಧಿಸೂಚನೆಗಳು ರದ್ದಾಗಿರುತ್ತವೆ.

ಈ ನಿಟ್ಟಿನಲ್ಲಿ ರಾಜ್ಯ ಸರ್ಕಾರವು ಅಧಿನಿಯಮದ ಪ್ರಕರಣ 308ಕ್ಕೆ ತಿದ್ದುಪಡಿ ತಂದಿದ್ದು, ಪ್ರಕರಣ 308-ಇ ರಿಂದ 308-ಎಂ ರವರೆಗೆ ಹೊಸ ಪ್ರಕರಣಗಳನ್ನು ಅಳವಡಿಸಿದೆ. ಪ್ರಕರಣ 308-ಇ ರನ್ವಯ ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗವನ್ನು ರಚಿಸಲಾಗಿರುತ್ತದೆ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 122 ಮತ್ತು 161, ಅನುಕ್ರಮವಾಗಿ ತಾಲ್ಲೂಕು ಪಂಚಾಯತಿ ಹಾಗೂ ಜಿಲ್ಲಾ ಪಂಚಾಯತಿಗಳ ಚುನಾಯಿತ ಸದಸ್ಯರ ಸಂಖ್ಯೆಯನ್ನು ಪ್ರತಿಯೊಂದು ಜನಗಣತಿಯ ತರುವಾಯ ಗ್ರಾಮೀಣ ಜನಸಂಖ್ಯೆಗಳಿಗನುಗುಣವಾಗಿ ನಿರ್ಧರಿಸಬೇಕಾಗುತ್ತದೆ. ಇದುವರೆವಿಗೂ ರಾಜ್ಯ ಚುನಾವಣಾ ಆಯೋಗವು ಈ ಜವಾಬ್ದಾರಿಯನ್ನು ನಿರ್ವಹಿಸುತ್ತಿದ್ದು, ಉಲ್ಲೇಖ-1ರ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ಅಧಿನಿಮಯ 2021ರ ಪ್ರಕರಣ 308(ಎಫ್) ರನ್ವಯ ಇನ್ನು ಮುಂದೆ ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗವು ನಿರ್ಧರಿಸಿ, ಸರ್ಕಾರಕ್ಕೆ ಶಿಫಾರಸ್ಸು ಮಾಡಬೇಕಾಗಿರುತ್ತದೆ.

ಕ್ಷೇತ್ರ ವಿಂಗಡಣಾ ಕಾರ್ಯವು ಬಹಳ ಪ್ರಾಮುಖ್ಯವಾದದ್ದಾಗಿದ್ದು, ಇದನ್ನು ಪಾರದರ್ಶಕವಾಗಿ ಮತ್ತು ಸಾರ್ವಜನಿಕರಿಗೆ ಅನುಕೂಲವಾಗುವಂತೆ ಮಾಡುವುದು ಅವಶ್ಯಕವಾಗಿರುತ್ತದೆ. ಆದುದರಿಂದ ಈ ಅಧಿನಿಯಮದಡಿ ಕ್ಷೇತ್ರ ವಿಂಗಡಣಾ ಕಾರ್ಯವಿಧಾನಕ್ಕೆ ಸಂಬಂಧಿಸಿದಂತೆ ಮಾರ್ಗಸೂಚಿಗಳನ್ನು ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗವು ಪ್ರಕರಣ 308(ಜಿ)ರನ್ವಯ ರೂಪಿಸಿ ಅನುಷ್ಠಾನಗೊಳಿಸಬೇಕಾಗಿರುತ್ತದೆ.

ಭಾರತ ಸಂವಿಧಾನದ ಅನುಚ್ಛೇದ 243-ಕೆ ಮತ್ತು 243-ಓ ಹಾಗೂ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 122, 124, 161, 163 ಮತ್ತು 308, 308-ಇ ರಿಂದ 308-ಎಂ ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯದ ಆಯೋಗವು ತಾಲ್ಲೂಕು ಪಂಚಾಯತ್ ಹಾಗೂ ಜಿಲ್ಲಾ ಪಂಚಾಯತಿಗಳ ಪ್ರಾದೇಶಿಕ ಕ್ಷೇತ್ರಗಳ ವಿಂಗಡಣೆ ಕುರಿತು ಈ ಕೆಳಗಿನಂತೆ ಮಾರ್ಗಸೂಚಿಗಳನ್ನು ಹೊರಡಿಸಿದೆ.

ಈಗಾಗಲೇ ಜಿಲ್ಲಾ ಪಂಚಾಯತ್/ ತಾಲ್ಲೂಕು ಪಂಚಾಯತ್ ಸದಸ್ಯರ ಸಂಖ್ಯೆಯನ್ನು ಆಯೋಗವು ನಿಗದಿಪಡಿಸಿದಂತೆ ಜಿಲ್ಲಾಧಿಕಾರಿಗಳೊಂದಿಗೆ ಸಮಾಲೋಚಿಸಿ ಸದಸ್ಯರ ಸಂಖ್ಯೆಯನ್ನು ಅಂತಿಮಗೊಳಿಸಲಾಗಿದೆ.

**I. ತಾಲ್ಲೂಕು ಪಂಚಾಯಿತಿ ಪ್ರಾದೇಶಿಕ ಚುನಾವಣಾ ಕ್ಷೇತ್ರಗಳ ಸೀಮಾ ನಿರ್ಣಯ ನಿಗದಿಪಡಿಸುವ ಬಗ್ಗೆ ಮಾರ್ಗಸೂಚಿ:-**

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 124ರನ್ವಯ ಪ್ರಾದೇಶಿಕ ಚುನಾವಣಾ ಕ್ಷೇತ್ರಗಳ ವ್ಯಾಪ್ತಿಯನ್ನು ನಿರ್ಧರಿಸುವಾಗ:-

1) ತಾಲ್ಲೂಕಿನಲ್ಲಿರುವ ನಗರ ಸ್ಥಳೀಯ ಸಂಸ್ಥೆಗೆ ಸೇರ್ಪಡೆಯಾಗಿರುವ/ನಗರ ಸ್ಥಳೀಯ ಸಂಸ್ಥೆಗಳಾಗಿ ಮೇಲ್ದರ್ಜೆಗೇರಿಸಿರುವ ಗ್ರಾಮಾಂತರ ಪ್ರದೇಶಗಳನ್ನು ಹೊರತುಪಡಿಸಿ, ಉಳಿದ ಗ್ರಾಮೀಣ ಪ್ರದೇಶಗಳನ್ನು ಮಾತ್ರ ಗಣನೆಗೆ ತೆಗೆದುಕೊಳ್ಳಬೇಕು.

2) ತಾಲ್ಲೂಕಿನಲ್ಲಿರುವ ಒಂದು ಜಿಲ್ಲಾ ಪಂಚಾಯತಿ ಕ್ಷೇತ್ರದೊಳಗೆ ಎಷ್ಟು ತಾಲ್ಲೂಕು ಪಂಚಾಯತಿ ಕ್ಷೇತ್ರಗಳನ್ನು ರಚಿಸಬಹುದೋ ಅಷ್ಟು ಕ್ಷೇತ್ರಗಳನ್ನು ಆ ಜಿಲ್ಲಾ ಪಂಚಾಯತ್ ಕ್ಷೇತ್ರದ ವ್ಯಾಪ್ತಿಯೊಳಗೆ ಅಳವಡಿಸಿ ರಚಿಸಬೇಕು.

3) ಜಿಲ್ಲಾ ಪಂಚಾಯತ್ ಕ್ಷೇತ್ರದೊಳಗೆ ಬರುವ ಪೂರ್ಣ ಗ್ರಾಮ ಪಂಚಾಯಿತಿಗಳನ್ನು ಸಾಧ್ಯವಾದಷ್ಟು ಮಟ್ಟಿಗೆ ಒಟ್ಟುಗೂಡಿಸಿ, ತಾಲ್ಲೂಕು ಪಂಚಾಯಿತಿ ಕ್ಷೇತ್ರಗಳನ್ನು ನಿರ್ಧರಿಸಬೇಕು ಹಾಗೂ ಅದು ಸಾಧ್ಯವಾಗದಿದ್ದರೆ ಗ್ರಾಮಗಳನ್ನು ಗುಂಪು ಮಾಡುವುದು. ಗ್ರಾಮಗಳನ್ನು ಗುಂಪು ಮಾಡುವ ಸಂದರ್ಭದಲ್ಲಿ ಮೂಲ ಗ್ರಾಮವನ್ನು ವಿಭಜಿಸತಕ್ಕದಲ್ಲ ಹಾಗೂ ಕಂದಾಯ ಗ್ರಾಮದ ದಾಖಲೆ ಗ್ರಾಮಗಳನ್ನು ಬೇರೆಯಾಗಿ ವಿಂಗಡಿಸದೆ ಕಂದಾಯ ಗ್ರಾಮದೊಂದಿಗೆ ಇರುವಂತೆ ನೋಡಿಕೊಳ್ಳತಕ್ಕದ್ದು.

4) ತಾಲ್ಲೂಕು ಪಂಚಾಯಿತಿಗಳನ್ನು ಜಿಲ್ಲಾ ಪಂಚಾಯತಿ ಕ್ಷೇತ್ರದೊಳಗೆ ಒಟ್ಟುಗೂಡಿಸುವ ಸಂದರ್ಭದಲ್ಲಿ ಯಾವುದೇ ಕಾರಣಕ್ಕೂ, ಒಂದು ತಾಲ್ಲೂಕು ಪಂಚಾಯತಿ ಕ್ಷೇತ್ರವು ಎರಡು ಜಿಲ್ಲಾ ಪಂಚಾಯಿತಿ ಕ್ಷೇತ್ರಗಳಿಗೆ ವಿಭಜಿಸಿ ಸೇರಿಸತಕ್ಕದ್ದಲ್ಲ.

5) ಪ್ರತಿಯೊಂದು ಚುನಾವಣಾ ಕ್ಷೇತ್ರಗಳ ಜನಸಂಖ್ಯೆಯಲ್ಲಿ ಸಾಧ್ಯವಾಗುವಷ್ಟರ ಮಟ್ಟಿಗೆ ಹೆಚ್ಚಿನ ವ್ಯತ್ಯಾಸವಿರದಂತೆ ನಿಗಾವಹಿಸತಕ್ಕದ್ದು.

6) ಹೊಸದಾಗಿ ಕ್ಷೇತ್ರ ರಚನೆ ಮಾಡಬೇಕಾದ ಸಂದರ್ಭದಲ್ಲಿ ಮಾತ್ರ ಸದರಿ ಕ್ಷೇತ್ರಗಳಲ್ಲಿನ ಅತಿ ಹೆಚ್ಚು ಜನಸಂಖ್ಯೆಯಿರುವ ಗ್ರಾಮದ ಹೆಸರನ್ನು ಆ ಚುನಾವಣಾ ಕ್ಷೇತ್ರದ ಹೆಸರನ್ನಾಗಿ ಪರಿಗಣಿಸತಕ್ಕದ್ದು.

**II. ಜಿಲ್ಲಾ ಪಂಚಾಯಿತಿ ಪ್ರಾದೇಶಿಕ ಚನಾವಣಾ ಕ್ಷೇತ್ರಗಳ ಸೀಮಾ ನಿರ್ಣಯ ನಿಗದಿಪಡಿಸುವ ಬಗ್ಗೆ ಮಾರ್ಗಸೂಚಿ:-**

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 163ರನ್ವಯ ಜಿಲ್ಲಾ ಪಂಚಾಯಿತಿಯ ಪ್ರಾದೇಶಿಕ ಚುನಾವಣಾ ಕ್ಷೇತ್ರಗಳ ಸೀಮೆಯನ್ನು ನಿರ್ಧರಿಸುವಾಗ :-

1) ನಗರ ಸ್ಥಳೀಯ ಸಂಸ್ಥೆಗೆ ಸೇರ್ಪಡೆಯಾಗಿರುವ/ನಗರ ಸ್ಥಳೀಯ ಸಂಸ್ಥೆಗಳಾಗಿ ಮೇಲ್ದರ್ಜೆಗೇರಿಸಿರುವ ಗ್ರಾಮಾಂತರ ಪ್ರದೇಶಗಳನ್ನು ಹೊರತುಪಡಿಸಿ, ಗ್ರಾಮೀಣ ಪ್ರದೇಶಗಳನ್ನು ಮಾತ್ರ ಗಣನೆಗೆ ತೆಗೆದುಕೊಳ್ಳಬೇಕು.

2) ತಾಲ್ಲೂಕಿನಲ್ಲಿರುವ ಗ್ರಾಮ ಪಂಚಾಯತಿಗಳನ್ನು ವಿಭಜಿಸದೆ ಪೂರ್ಣ ಗ್ರಾಮ ಪಂಚಾಯತಿಗಳನ್ನು ಒಟ್ಟುಗೂಡಿಸಿ, ಜಿಲ್ಲಾ ಪಂಚಾಯತಿಯ ಚುನಾವಣಾ ಕ್ಷೇತ್ರ ರಚನೆಯಾಗುವಂತೆ ನೋಡಿಕೊಳ್ಳತಕ್ಕದ್ದು.

3) ಈ ರೀತಿ ಗ್ರಾಮ ಪಂಚಾಯತಿಗಳನ್ನು ಒಟ್ಟುಗೂಡಿಸುವ ಸಂದರ್ಭದಲ್ಲಿ ಅಕ್ಕಪಕ್ಕದ (ಭೌಗೋಳಿಕವಾಗಿ ಹೊಂದಿಕೊಂಡಿರುವಂತಹ) ಗ್ರಾಮ ಪಂಚಾಯತಿಗಳನ್ನು ಒಟ್ಟುಗೂಡಿಸಬೇಕು ಹಾಗೂ ಈ ಒಗ್ಗೂಡುವಿಕೆಯಿಂದ ಉಂಟಾಗುವ ಪ್ರದೇಶದ ಒಂದು ಭಾಗದಿಂದ ಇನ್ನೊಂದು ಭಾಗಕ್ಕೆ ಸಂಚಾರ ಮತ್ತು ಸಂಪರ್ಕ ವ್ಯವಸ್ಥೆ ಇರುವುದನ್ನು ಖಾತರಿಪಡಿಸಿಕೊಳ್ಳಬೇಕು ಹಾಗೂ ಒಂದು ಪ್ರದೇಶದಿಂದ ಮತ್ತೊಂದು ಪ್ರದೇಶಕ್ಕೆ ಸುಲಭವಾಗಿ ಸಂಚರಿಸುವಂತಿರಬೇಕು ಮತ್ತು ಯಾವುದೇ ಅಡೆತಡೆಗಳು ಇಲ್ಲದಿರುವುದನ್ನು ಅಂದರೆ, ಬೆಟ್ಟಗುಡ್ಡ, ಅರಣ್ಯ, ಜಲಾಶಯ, ನದಿ ಮುಂತಾದ ಅಡಚಣೆಗಳು ಇಲ್ಲದಿರುವುದನ್ನು ಖಾತರಿಪಡಿಸಿಕೊಳ್ಳಬೇಕು.

4) ಪ್ರತಿಯೊಂದು ಚುನಾವಣಾ ಕ್ಷೇತ್ರದ ಜನಸಂಖ್ಯೆಯಲ್ಲಿ ಸಾಧ್ಯವಾಗುವಷ್ಟರ ಮಟ್ಟಿಗೆ ಹೆಚ್ಚಿನ ವ್ಯತ್ಯಾಸವಿರದಂತೆ ನಿಗಾವಹಿಸತಕ್ಕದ್ದು.

5) ಹೊಸದಾಗಿ ಕ್ಷೇತ್ರ ರಚನೆ ಮಾಡಬೇಕಾದ ಸಂದರ್ಭದಲ್ಲಿ ಮಾತ್ರ ಸದರಿ ಕ್ಷೇತ್ರಗಳಲ್ಲಿನ ಅತಿ ಹೆಚ್ಚು ಜನಸಂಖ್ಯೆಯಿರುವ ಗ್ರಾಮದ ಹೆಸರನ್ನು ಆ ಚುನಾವಣಾ ಕ್ಷೇತ್ರ ಹೆಸರನ್ನಾಗಿ ಪರಿಗಣಿಸತಕ್ಕದ್ದು.

6) ಜಿಲ್ಲಾ ಪಂಚಾಯತ್ ಕ್ಷೇತ್ರಗಳನ್ನು ರಚಿಸುವಾಗ ಯಾವುದೇ ತಾಲ್ಲೂಕು ಪಂಚಾಯತ್ ಕ್ಷೇತ್ರವು ಎರಡು ಜಿಲ್ಲಾ ಪಂಚಾಯತ್ ಕ್ಷೇತ್ರದ ವ್ಯಾಪ್ತಿಯಲ್ಲಿ ವಿಭಜನೆಯಾಗದಂತೆ ನೋಡಿಕೊಳ್ಳತಕ್ಕದ್ದು.

**III. ರಾಜ್ಯದ ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳ ಕರ್ತವ್ಯಗಳು;**

1. ಜಿಲ್ಲಾಧಿಕಾರಿಗಳು, ತಾಲ್ಲೂಕು ಪಂಚಾಯತಿ ಹಾಗೂ ಜಿಲ್ಲಾ ಪಂಚಾಯತಿಗಳ ಸೀಮಾ ನಿರ್ಣಯಗಳನ್ನು ನಿಯಮಾನುಸಾರ ಕೂಲಂಕುಷವಾಗಿ ಹಾಗೂ ಸ್ಥಳೀಯವಾಗಿ ಪರಿಶೀಲಿಸಿ ಕ್ಷೇತ್ರಗಳ ಗಡಿಗಳನ್ನು ಗುರುತಿಸತಕ್ಕದ್ದು.
2. ಗಡಿಗಳನ್ನು ಗುರುತಿಸಿದ ನಂತರ ಪ್ರಸ್ತಾವನೆಗಳನ್ನು ಆಯೋಗಕ್ಕೆ ಸಲ್ಲಿಸುವ ಪೂರ್ವದಲ್ಲಿ ಒಟ್ಟು ಪ್ರಕ್ರಿಯೆಯ ಭಾಗವಾಗಿ ಸ್ಥಳೀಯರ, ಜನಪ್ರತಿನಿಧಿಗಳ ಅಭಿಪ್ರಾಯಗಳನ್ನು ಪಡೆದು, ಪರಿಶೀಲಿಸಿ ಪ್ರಸ್ತಾವನೆಗಳನ್ನು ಸಲ್ಲಿಸತಕ್ಕದ್ದು.
3. ಹೊಸದಾಗಿ ರಚಿಸುವ ಜಿಲ್ಲಾ ಪಂಚಾಯತ್/ ತಾಲ್ಲೂಕು ಪಂಚಾಯತ್ ಕ್ಷೇತ್ರಗಳ ಹೆಸರನ್ನು ನಿಗದಿಪಡಿಸುವಾಗ ಅತೀ ಹೆಚ್ಚು ಜನಸಂಖ್ಯೆ ಇರುವ ಗ್ರಾಮದ ಹೆಸರನ್ನಲ್ಲದೇ, ಐತಿಹಾಸಿಕ, ಶೈಕ್ಷಣಿಕ, ಸಾಂಸ್ಕೃತಿಕ, ವಾಣಿಜ್ಯ ಇತ್ಯಾದಿ ಮಹತ್ವವಿರುವ ಗ್ರಾಮದ ಹೆಸರನ್ನು ಪರಿಗಣಿಸತಕ್ಕದ್ದು.
4. ಜಿಲ್ಲಾಧಿಕಾರಿಗಳು ಪ್ರಸ್ತಾವನೆಯನ್ನು ಆಯೋಗಕ್ಕೆ ಸಲ್ಲಿಸುವಾಗ ಪ್ರಸ್ತಾವನೆಗೊಳಪಡುವ ಕ್ಷೇತ್ರಗಳನ್ನು ನಕ್ಷೆಗಳೊಂದಿಗೆ ಕಳುಹಿಸಿಕೊಡತಕ್ಕದ್ದು.

(ಆಯೋಗದ ಅಧ್ಯಕ್ಷರಿಂದ ಅನುಮೋದಿತ)

(ಕೆ.ಬಿ.ಅಂಜನಪ್ಪ)
ಸದಸ್ಯ ಕಾರ್ಯದರ್ಶಿಗಳು,
ಕರ್ನಾಟಕ ಪಂಚಾಯತ್ ರಾಜ್
ಸೀಮಾ ನಿರ್ಣಯ ಆಯೋಗ.

**PR-175**

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59.
SUNIL GARDE